ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/02/ಇಎಸ್‌ಟಿ(9)/2020-21 | 519

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001.
ದಿನಾಂಕ: 21-09-2020.

## ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆಯ ಪತ್ರ ಸಂಖ್ಯೆ: ಸಿಆಸುಇ 10 ಸೇನೆನಿ 2020 ದಿನಾಂಕ:08/09/2019 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ (ಇಲಾಖಾ ವೆಬ್‌ಸೈಟ್ ಮುಖಾಂತರ)
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ಆಯುಕ್ತರ ಆಪ್ತ ಶಾಖೆಗೆ
4. ನಿರ್ದೇಶಕರ ಆಪ್ತ ಶಾಖೆಗೆ
5. ಈ ನಿರ್ದೇಶನಾಲಯದ ಪರೀಕ್ಷಾ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆವ್ತ ಶಾಖೆ
ಸಂಖ್ಯೆ 656
ದಿನಾಂಕ 14/09/2020
EST-09

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 10 ಸೇನೆನಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:08.09.2020

1714247/2020

ಸುತ್ತೋಲೆ

ವಿಷಯ: ನಕಲಿ ಅಂಕಪಟ್ಟಿಗಳ ಆಧಾರದ ಮೇಲೆ ಸರ್ಕಾರಿ ಉದ್ಯೋಗ ಪಡೆಯುವುದನ್ನು ತಡೆಯಲು ಆನ್‌ಲೈನ್ ಮೂಲಕ ಅಂಕಪಟ್ಟಿಗಳನ್ನು ವಿತರಿಸುವ ಮತ್ತು ದೃಢೀಕರಿಸಲು ತಗಲುವ ವೆಚ್ಚವನ್ನು ಭರಿಸುವ ಬಗ್ಗೆ.

140
18/9/2020

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 10 ಸೇನೆನಿ 2019, ದಿನಾಂಕ: 17.7.2019.

*~*~*~*~*

ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರ ಹಾಗೂ ಇನ್ನಿತರೆ ದಾಖಲಾತಿಗಳ ಜೊತೆಗೆ ಅಭ್ಯರ್ಥಿಗಳು ಸಲ್ಲಿಸುವ ಅಂಕಪಟ್ಟಿ / ಶೈಕ್ಷಣಿಕ ಪ್ರಮಾಣ ಪತ್ರಗಳ ನೈಜತೆಯನ್ನು ಅವುಗಳನ್ನು ವಿತರಿಸಿದ ವಿಶ್ವವಿದ್ಯಾಲಯಗಳು / ಶೈಕ್ಷಣಿಕ ಪರೀಕ್ಷಾ ಮಂಡಳಿಗಳೊಂದಿಗೆ ಪರಿಶೀಲನೆ ನಡೆಸತಕ್ಕದ್ದು. ಪರಿಶೀಲನೆಯ ನಂತರ ಅಂತಹ ಪ್ರಮಾಣ ಪತ್ರಗಳು ಸಂಬಂಧಿಸಿದ ವಿಶ್ವವಿದ್ಯಾಲಯಗಳು / ಶೈಕ್ಷಣಿಕ ಪರೀಕ್ಷಾ ಮಂಡಳಿಗಳಿಂದಲೇ ವಿತರಿಸಲಾದ ಪ್ರಮಾಣ ಪತ್ರಗಳೆಂದು ಖಾತ್ರಿಯಾದ ನಂತರವೇ ನೇಮಕಾತಿ ಆದೇಶ ಹೊರಡಿಸತಕ್ಕದೆಂದು ಎಲ್ಲಾ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರಗಳಿಗೆ ಉಲ್ಲೇಖಿತ ದಿನಾಂಕ: 17.7.2019ರ ಸರ್ಕಾರಿ ಆದೇಶದಲ್ಲಿ ಆದೇಶಿಸಲಾಗಿರುತ್ತದೆ.

ದಿನಾಂಕ: 17.7.2019ರ ಸರ್ಕಾರಿ ಆದೇಶದಲ್ಲಿ ಸೂಚನೆಯಂತೆ, ಅಭ್ಯರ್ಥಿಗಳು ಸಲ್ಲಿಸುವ ಅಂಕಪಟ್ಟಿ / ಶೈಕ್ಷಣಿಕ ಪ್ರಮಾಣ ಪತ್ರಗಳ ನೈಜತೆಯನ್ನು ಅವುಗಳನ್ನು ವಿತರಿಸಿದ ವಿಶ್ವವಿದ್ಯಾಲಯಗಳು / ಶೈಕ್ಷಣಿಕ ಪರೀಕ್ಷಾ ಮಂಡಳಿಗಳೊಂದಿಗೆ ಪರಿಶೀಲನೆ ನಡೆಸುವ ಸಂದರ್ಭದಲ್ಲಿ ತಗಲುವ ವೆಚ್ಚವನ್ನು ಆಯ್ಕೆಯಾದ ಅಭ್ಯರ್ಥಿಗಳಿಂದಲೇ ಭರಿಸುವಂತೆ ಸೂಚಿಸಲಾಗಿದೆ. ಒಂದುವೇಳೆ ಎಲ್ಲಾ ಅಭ್ಯರ್ಥಿಗಳ ಅಂಕಪಟ್ಟಿ/ ಶೈಕ್ಷಣಿಕ ಪ್ರಮಾಣ ಪತ್ರಗಳ ನೈಜತೆಯನ್ನು ಪರಿಶೀಲಿಸಬೇಕಾಗುತ್ತದೆ ಎಂಬ ಸಂದರ್ಭದಲ್ಲಿ ನೇಮಕಾತಿ / ಆಯ್ಕೆ ಪ್ರಾಧಿಕಾರಗಳು ನೇಮಕಾತಿಗಾಗಿ ಅಧಿಸೂಚನೆ ಹೊರಡಿಸುವ ಮುನ್ನವೇ ಅದಕ್ಕಾಗಿ ತಗಲುವ ಶುಲ್ಕವನ್ನು ಲೆಕ್ಕ ಹಾಕಿ ಅರ್ಜಿ ಶುಲ್ಕದೊಂದಿಗೆ ಸೇರಿಸಿಕೊಂಡು ಜಾಹೀರಾತು ನೀಡುವಂತೆ ತಿಳಿಸಲಾಗಿದೆ.

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರು ಅವರ ಆಡಳಿತ ವ್ಯಾಪ್ತಿಗೊಳಪಡುವ ಸ್ವಾಯತ್ತ ಸಂಸ್ಥೆಗಳು / ವಿಶ್ವವಿದ್ಯಾಲಯಗಳು / ಸಾರ್ವಜನಿಕ ಉದ್ದಿಮೆಗಳು / ಆಯೋಗ / ನಿಗಮ / ಮಂಡಳಿಗಳು / ಸ್ಥಳೀಯ ಸಂಸ್ಥೆಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೆ ಮೇಲ್ಕಂಡ ಸೂಚನೆಗಳನ್ನು ಪಾಲಿಸುವಂತೆ ಸೂಚಿಸಲು ತಿಳಿಸಲಾಗಿದೆ.

ಈ ಸುತ್ತೋಲೆಯನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 409 ವೆಚ್ಚ-12/2020 (ಇ-ಆಫೀಸ್), ದಿನಾಂಕ: 05.08.2020 ಅಭಿಪ್ರಾಯದಂತೆ ಹೊರಡಿಸಲಾಗಿದೆ.

08/09/2020
(ಎ.ವಿ. ಶೈಲಜ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಿಬ್ಬಂದಿ ಮತ್ತು ಆಡಳಿತ ಸುದಾರಣೆ ಇಲಾಖೆ
(ಸೇವಾ ನಿಯಮಗಳು)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ 250 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು-ಎ), ನಂ. 31, ವಿಧಾನ ಸೌಧ, ಬೆಂಗಳೂರು ಇವರಿಗೆ ಒದಗಿಸುವಂತೆ ಕೋರಿದೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು / ಪ್ರಧಾನ ಕಾರ್ಯದರ್ಶಿಯವರು / ಕಾರ್ಯದರ್ಶಿಯವರು.
5. ಪ್ರಧಾನ ಮಹಾಲೇಖಪಾಲರು (ಜಿ ಮತ್ತು ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು - 560 001.
6. ಪ್ರಧಾನ ಮಹಾಲೇಖಪಾಲರು (ಇ ಮತ್ತು ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು - 560 001.
7. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು - 560 001.
8. ಎಲ್ಲಾ ಇಲಾಖಾ ಮುಖ್ಯಸ್ಥರು / ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು / ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
9. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560 003.
10. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560 012.
11. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ / ಪರಿಷತ್ತು, ವಿಧಾನ ಸೌಧ, ಬೆಂಗಳೂರು.
12. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
13. *ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
14. *ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
15. *ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
16. ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು / ಇಲಾಖೆಯ ಅಂತರ್ಜಾಲ ತಾಣ.

(* ಪ್ರತ್ಯೇಕ ಪತ್ರದೊಂದಿಗೆ)